**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 1012/2017**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - ಬಾಲರಾಜು | | **ಚಾ.ಸಾ.-19** |
| **ತಂದೆಯ ಹೆಸರು** | - ವೆಂಕಟಯ್ಯ | | **ಫ್ರಾ.ಸಾ.-7** |
| **ವಯಸ್ಸು** | - 66 ವರ್ಷ | | |
| **ಉದ್ಯೋಗ** | - ಅಟೆಂಡರ್ ಕೆಲಸ | | |
| **ವಾಸಸ್ಥಳಃ** | - ಮಂಡ್ಯ | | |

ದಿನಾಂಕಃ 19-08-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿ.ಪಿ. 2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 2 ಬಿ ಎಂದು ಗುರುತಿಸಲಾಯಿತು. ಸದರೀ ದಾಖಲೆಗೆ 2016 ರಂದು ನಮ್ಮ ಕಚೇರಿಯಲ್ಲಿ ಸಹಿ ಮಾಡಿರುತ್ತೇನೆ. ನಿ.ಪಿ. 2 ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿ.ಪಿ. 2 ದಾಖಲೆಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ದಾಖಲಾತಿಯನ್ನು ಅಮಾನತ್ತುಪಡಿಸಿಕೊಂಡಿಲ್ಲ. ಯಾವುದೇ ಮಹಜರ್ ಕ್ರಮ ಜರುಗಿಸಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ**

ದಿನಾಂಕಃ 16.08.2016 ರಂದು ಬೆಳಗ್ಗೆ 11.15 ರಿಂದ 01.00 ಗಂಟೆಯವರೆಗೆ ಮದ್ದೂರು ಪೊಲೀಸ್ ಠಾಣೆಯ ಅಪರಾಧ ವಿಭಾಗದ ಪಿ ಎಸ್ ಐ ರವರ ಕೊಠಡಿಯಲ್ಲಿ ನನ್ನ ಮತ್ತು ಚಾಸಾ-20 ರವರ ಸಮಕ್ಷಮ ಚಾಸಾ-1 ರವರು ಆರೋಪಿ-1 ಮತ್ತು 2 ರವರಿಗೆ ಸಂಬಂಧಿಸಿದ ದಾಖಲಾತಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ರಂತೆ ಮಹಜರ್ ಕ್ರಮ ಜರುಗಿಸಿ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿ.ಪಿ. 2 ರಲ್ಲಿರುವ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ ಮತ್ತು ಜೆ ಎಂ ಎಫ್ ಸಿ , ಮದ್ದೂರು.